ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೩

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೈದನೇ ಅಧಿವೇಶನ**

**ಬುಧವಾರ, ದಿನಾಂಕ: ೨೫ನೇ ಜೂನ್, ೨೦೧೪**

---

**ಸಮೂಹ – III**

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೫. ಸಣ್ಣ ನೀರಾವರಿ ಸಚಿವರು

೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

೭. ಕಾರ್ಮಿಕ ರಾಜ್ಯ ಸಚಿವರು

---

## ಒಳಾಂಗಣ ಕ್ರೀಡಾಂಗಣ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೩೧ (೮೭) ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾವೇರಿ ನಗರದ ಜಿಲ್ಲಾ ಕ್ರೀಡಾಂಗಣ ಮೂರು ವರ್ಷಗಳ ಹಿಂದೆ ೩.೮೫ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿದ್ದ ಒಳಾಂಗಣ ಕ್ರೀಡಾಂಗಣ ಹಾಗೂ ಈಜು ಕೊಳ ದುಸ್ಥಿತಿಯಲ್ಲಿದ್ದು, ಮೂರು ತಿಂಗಳು ಮಾತ್ರ ಕ್ರೀಡಾಪಟುಗಳಿಗೆ ಉಪಯೋಗಕ್ಕೆ ಬಂದಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಬಂದಿದ್ದರೆ, ಕಟ್ಟಡದ ಬಳಿ ಯಾರೂ ಹೋಗದಂತೆ ನಿರ್ಬಂಧಿಸಿ ಬ್ಯಾರಿಕೇಡ್ ಹಾಕಿರುವುದು ಹಾಗೂ ಬಂದ್ ಮಾಡಲು ಸೂಚಿಸಿರುವ ಜಿಲ್ಲಾಧಿಕಾರಿಯವರ ಆದೇಶದ ಪ್ರತಿ ಅಂಟಿಸಿರುವುದು ಏಕೆ ;

(ಇ) ಕಳಪೆ ಕಾಮಗಾರಿಯಿಂದ ಒಳಾಂಗಣ ಕ್ರೀಡಾಂಗಣದ ಕಟ್ಟಡ ಕುಸಿದಿದ್ದು, ಈಜು ಕೊಳದ ನೀರು ಬಸಿಯುವುದು ಮತ್ತು ವಿದ್ಯುತ್ ಬಿಲ್ ಬಾಕಿ ಇರುವುದು ಇವೆಲ್ಲವೂ ತನಿಖೆ ನಡೆಸಬೇಕೆಂದು ನಾಗರಿಕರು ಆಗ್ರಹಿಸುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ?

**ತುಂಗಾ ನಾಲಾ ಆಧುನೀಕರಣ ಕಾಮಗಾರಿ**

**ಶ್ರೀ ಆರ್.ಕೆ. ಸಿದ್ಧರಾಮಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೨ (೧೦೪) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುಂಗಾ ನಾಲಾ ಆಧುನೀಕರಣ ಕಾಮಗಾರಿ ಈವರೆಗೂ ಪ್ರಾರಂಭವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಂದಿನಿಂದ ಕಾಮಗಾರಿ ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

**ಚಿರತೆ ಹಾವಳಿಯಿಂದ ಭೀತಿಗೊಂಡ ಜನತೆ**

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೩ (೭೯) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಡ್ಯ ಜಿಲ್ಲೆಯ ಕೆಲವು ತಾಲ್ಲೂಕುಗಳಲ್ಲಿ ಚಿರತೆಗಳ ಹಾವಳಿಯಿಂದ ಸಾರ್ವಜನಿಕರು ಭೀತಿಗೊಂಡು ರಸ್ತೆಗಳಲ್ಲಿ ಓಡಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ ಜಿಲ್ಲೆಯಲ್ಲಿ ಚಿರತೆ ಇರುವ ಗ್ರಾಮಗಳನ್ನು ಗುರುತಿಸಲಾಗಿದೆಯೇ ; (ಗ್ರಾಮಗಳ ವಿವರಗಳನ್ನು ನೀಡುವುದು)

(ಇ) ಚಿರತೆ ಹಾವಳಿಯಿಂದ ಇದುವರೆಗೂ ಎಷ್ಟು ಮಂದಿ ಸಾವನ್ನಪ್ಪಿದ್ದಾರೆ ; (ಪೂರ್ಣ ಮಾಹಿತಿ ನೀಡುವುದು)

(ಈ) ಸಾವನ್ನಪ್ಪಿರುವ ವ್ಯಕ್ತಿಗಳಿಗೆ ಸರ್ಕಾರದಿಂದ ಪರಿಹಾರವನ್ನು ನಿಗದಿಪಡಿಸಲಾಗಿದೆಯೇ ;

(ಉ) ನಿಗದಿಪಡಿಸಿದ್ದರೆ, ಪರಿಹಾರದ ಮೊತ್ತವೆಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಊ) ಇದುವರೆಗೂ ನೀಡಿರುವ ಪರಿಹಾರದ ಮೊತ್ತವೆಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಋ) ಚಿರತೆ ಹಿಡಿಯಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಭೂ ಮಂಜೂರಾತಿ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೪ (೧೨೬) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೯೪ಸಿ ಅಡಿಯಲ್ಲಿ ಭೂ ಮಂಜೂರಾತಿಗೆ ಅರ್ಜಿ ಸಲ್ಲಿಸಲು ಅವಶ್ಯಕತೆ ಇರುವ ದಾಖಲೆಗಳು ಯಾವುವು ;

(ಆ) ೯೪ಸಿ ಅಡಿಯಲ್ಲಿ ಅರ್ಜಿ ಸಲ್ಲಿಸುವಾಗ ಫಲಾನುಭವಿಯು ಸಂಪೂರ್ಣ ಮಾಹಿತಿಯನ್ನು ಒದಗಿಸಿದಲ್ಲಿ ಭೂ ಮಂಜೂರಾತಿಗೆ ತಗಲುವ ಸಮಯವೆಷ್ಟು ; ಮತ್ತು ೯೪ಸಿ ಅಡಿಯಲ್ಲಿ ಅರ್ಜಿ ಸ್ವೀಕರಿಸುವ ಸಾಫ್ಟ್‌ವೇರ್‌ನ್ನು ಗ್ರಾಮ ಪಂಚಾಯತ್‌ಗಳಲ್ಲಿ ಅಳವಡಿಸಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು :

( ಇ) ಇಳಸಿ ಅಡಿಯಲ್ಲಿ ಅರ್ಜಿ ಸಲ್ಲಿಸಲು ನಕ್ಷೆ ಮೊದಲಾದವುಗಳನ್ನು ಒದಗಿಸುವಲ್ಲಿ ಫಲಾನುಭವಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇಲ್ಲದಿದ್ದಲ್ಲಿ, ಇದನ್ನು ಸರಳೀಕರಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

**ಅರಣ್ಯ ಕಾವಲು ಪಡೆ ಸಿಬ್ಬಂದಿ ವಸತಿ ಗೃಹಗಳಿಗೆ ಸೌಲಭ್ಯ**

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೫ (೧೦೬) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಂಡಿಪುರ ಅಭಯಾರಣ್ಯದ ಕೆಕ್ಕನಹಳ್ಳ ಗೇಟ್‌ನಲ್ಲಿರುವ ಅರಣ್ಯ ಕಾವಲು ಪಡೆಯ ಸಿಬ್ಬಂದಿ ವರ್ಗದವರಿಗೆ ನಿರ್ಮಿಸಿರುವ ಮನೆಗಳು ಶಿಥಿಲವಾಗಿದ್ದು, ಮೂಲಭೂತ ಸೌಲಭ್ಯಗಳು ಮತ್ತು ಭದ್ರತೆಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಅರಣ್ಯ ಸಿಬ್ಬಂದಿಯ ವಸತಿ ಗೃಹಗಳನ್ನು ರಿಪೇರಿ ಮಾಡಿ, ನೀರು, ವಿದ್ಯುತ್ ಸೌಕರ್ಯ ಕಲ್ಪಿಸಿ ಸುತ್ತಲೂ ತಂತಿಬೇಲಿ ನಿರ್ಮಿಸಿ, ಹೈಮಾಸ್ಟ್ ವಿದ್ಯುತ್ ದೀಪ ಅಳವಡಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ ;

(ಇ) ಇಲ್ಲಿ ಇರತಕ್ಕ ಸಿಬ್ಬಂದಿಯ ವಸತಿ ಗೃಹಗಳೆಷ್ಟು ; ಪೂರ್ಣ ಪ್ರಮಾಣದಲ್ಲಿ ಸುಸಜ್ಜಿತವಾದ ಸಿಬ್ಬಂದಿ ವರ್ಗವನ್ನು ಈ ಚೆಕ್‌ಪೋಸ್ಟ್‌ನಲ್ಲಿ ನೇಮಿಸಲಾಗಿದೆಯೇ ? (ಒಟ್ಟು ಮಂಜೂರಾದ ಹುದ್ದೆಗಳು ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆಯನ್ನು ನೀಡುವುದು)

**ಬಾಲ ಕಾರ್ಮಿಕರ ಪುನರ್ ವಸತಿ ಕೇಂದ್ರಗಳು**

**ಡಾ॥ ಎಂ.ಆರ್. ಹುಲಿನಾಯ್ಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೬ (೧೦.೨) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಎಷ್ಟು ಬಾಲ ಕಾರ್ಮಿಕರನ್ನು ರಕ್ಷಿಸಲಾಗಿದೆ ; ಎಷ್ಟು ಜನರಿಗೆ ಪುನರ್ ವಸತಿ ಕಲ್ಪಿಸಲಾಗಿದೆ ;

(ಆ) ತುಮಕೂರು ಜಿಲ್ಲೆಯಲ್ಲಿ ಎಷ್ಟು ಮಕ್ಕಳಿಗೆ ಪುನರ್ ವಸತಿ ಕಲ್ಪಿಸಲಾಗಿದೆ ;

(ಇ) ಉತ್ತಮ ನಿರ್ವಹಣೆಗಾಗಿ ಮಕ್ಕಳ ಪುನರ್ ವಸತಿಗೆ ಸರಕಾರ ಏನು ಕಾರ್ಯಕ್ರಮ ಹಮ್ಮಿಕೊಂಡಿದೆ ; ತುಮಕೂರು ಜಿಲ್ಲೆಗೆ ಇದಕ್ಕಾಗಿ ಎಷ್ಟು ಹಣ ನಿಗದಿಪಡಿಸಲಾಗಿದೆ ?

## ಕೆರೆಗಳಿಗೆ ನೀರು ತುಂಬಿಸಲು ಕೈಗೊಂಡ ಕ್ರಮಗಳು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೭ (೭೮) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾಸನ ಜಿಲ್ಲೆಯಲ್ಲಿ ಅಂತರ್ಜಲ ಮಟ್ಟ ಸಂಪೂರ್ಣ ಕುಸಿದಿದ್ದು, ಇದನ್ನು ಅಭಿವೃದ್ಧಿಪಡಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ಜಿಲ್ಲೆಯ ದೊಡ್ಡ ಕೆರೆಗಳಲ್ಲಿ ಹೂಳೆತ್ತಿ ಅಭಿವೃದ್ಧಿಪಡಿಸಿ ನೀರು ತುಂಬಿಸಲು ಕೈಗೊಂಡಿರುವ ಕ್ರಮಗಳೇನು ;

(ಇ) ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ ಬಾಣಾವರ ಹೋಬಳಿ ರಂಗಸಕೆರೆ, ಬೇಲೂರಿನ ವಿಷ್ಣು ಸಮುದ್ರಕೆರೆ ಮತ್ತು ಹಾಸನದ ಎಲ್ಲಾ ಕೆರೆಗಳಿಗೆ ನೀರು ತುಂಬಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಣ್ಣ ನೀರಾವರಿ ಕೆರೆಗಳು

**ಶ್ರೀ ಕೆ. ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೮ (೧೧೦) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖೆಯಡಿಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಕೆರೆಗಳು ಮತ್ತು ಅವುಗಳ ವಿಸ್ತೀರ್ಣದ ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಕಳೆದ ೫ ವರ್ಷಗಳ ಅವಧಿಯಲ್ಲಿ ರಾಜ್ಯದ ಕೆರೆಗಳ ಪುನಃಶ್ಚೇತನ, ಅಭಿವೃದ್ಧಿಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರ ಒದಗಿಸಿದ ಅನುದಾನ ಎಷ್ಟು ; ಯಾವ ಕೆರೆಗಳನ್ನು ಈ ನಿಟ್ಟಿನಲ್ಲಿ ಅಭಿವೃದ್ಧಿಪಡಿಸಲಾಗಿದೆ ; (ಕೆರೆಗಳ ಜಿಲ್ಲಾವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಇ) ಇದೇ ಅವಧಿಯಲ್ಲಿ ಅಕ್ರಮವಾಗಿ ಒತ್ತುವರಿಯಾದ ಕೆರೆಗಳು ಎಷ್ಟು ; ಅಕ್ರಮ ಒತ್ತುವರಿದಾರರು ಯಾರು ; ಅವರುಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳು ಏನು ? (ಮಾಹಿತಿ ನೀಡುವುದು)

## ಕೆರೆಗಳ ಹೂಳೆತ್ತುವುದು

**ಶ್ರೀಮತಿ ಭಾರತಿ ಶೆಟ್ಟಿ (ವಿಧಾನ ಸಭೆಯಿಂದ ಚುನಾಯಿತರಾದವರು) –**

೩೯ (೧೨೫) ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಒಂದು ವರ್ಷದಿಂದ ಕೆರೆಗಳ ಹೂಳೆತ್ತಲು ಸರ್ಕಾರ ಮೀಸಲಿಟ್ಟಿರುವ ಹಣವೆಷ್ಟು ; ಈವರೆಗೆ ವೆಚ್ಚವಾಗಿರುವ ಹಣವೆಷ್ಟು ; ಹೂಳೆತ್ತುವ ಕಾಮಗಾರಿ ಪೂರ್ಣಗೊಂಡಿರುವ ಹಾಗೂ ಕಾಮಗಾರಿ ಪ್ರಗತಿಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕೆರೆಗಳ ಹೂಳೆತ್ತುವುದರಲ್ಲಿ ಅವ್ಯವಹಾರಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ಕಾರದ ಗಮನಕ್ಕೆ ಬಂದಿರುವ ಪ್ರಕರಣಗಳು ಯಾವುವು ; (ವಿವರ ನೀಡುವುದು)

(ಇ) ಕೆರೆಗಳ ಹೂಳೆತ್ತುವುದರಲ್ಲಿ ಆಗುತ್ತಿರುವ ಅವ್ಯವಹಾರಗಳನ್ನು ತಡೆಯಲು ಕೈಗೊಂಡಿರುವ ಕ್ರಮಗಳೇನು ;

(ಈ) ಪ್ರತಿ ವಿಧಾನಸಭಾ ಕ್ಷೇತ್ರದಲ್ಲೊಂದು ಕೆರೆಯನ್ನು ಅಭಿವೃದ್ಧಿಪಡಿಸುವ ಯೋಜನೆ ಜಾರಿಗೊಂಡಿದೆಯೇ ; ಯೋಜನೆಯನ್ನು ಯಾವಾಗ ಜಾರಿಗೆ ತರಲಾಗುವುದು ? (ಯೋಜನೆಯ ವಿವರ ನೀಡುವುದು)

## ಪುನರ್ ವಸತಿ ಕೇಂದ್ರಗಳು

**ಶ್ರೀ ಸಿದ್ದರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) –**

೪೦ (೧೦೩) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೨ ವರ್ಷಗಳಲ್ಲಿ ರಾಜ್ಯದಾದ್ಯಂತ ಎಷ್ಟು ಬಾಲ ಕಾರ್ಮಿಕರನ್ನು ರಕ್ಷಿಸಲಾಗಿದೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕಳೆದ ೨ ವರ್ಷಗಳಲ್ಲಿ ಇಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ಮತ್ತು ಎಷ್ಟು ಪ್ರಕರಣಗಳಲ್ಲಿ ಪುನರ್ ವಸತಿ ಕಲ್ಪಿಸಲಾಗಿದೆ ;

(ಇ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಇಂತಹ ಪ್ರಕರಣಗಳಿಗಾಗಿ ಸರ್ಕಾರ ಎಷ್ಟು ಅನುದಾನವನ್ನು ನಿಗದಿಪಡಿಸಲಾಗಿದೆ ? (ಬಾಲ ಕಾರ್ಮಿಕರಿಗೆ ಸರ್ಕಾರದ ವತಿಯಿಂದ ಒದಗಿಸುತ್ತಿರುವ ಸೌಲಭ್ಯಗಳ ಕುರಿತು ವಿವರ ಒದಗಿಸುವುದು)

## ಆಲಿಕಲ್ಲು ಮಳೆಯಿಂದಾಗಿ ಉಂಟಾಗಿರುವ ಹಾನಿ ಮತ್ತು ಪರಿಹಾರ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೪೧ (೮೮) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೪ರ ಫೆಬ್ರವರಿ ಮತ್ತು ಮಾರ್ಚ್ ತಿಂಗಳಿನಲ್ಲಿ ಉಂಟಾದ ಆಲಿಕಲ್ಲು ಮಳೆಯಿಂದಾಗಿ ರಾಜ್ಯದಲ್ಲಿ ಒಟ್ಟಾರೆ ಎಷ್ಟು ಪ್ರಮಾಣದ ಬೆಳೆ ಹಾನಿ ಆಗಿದೆ ; (ವಿವರ ನೀಡುವುದು)

(ಆ) ಈ ಹಾನಿಗೆ ಪರಿಹಾರದ ರೂಪದಲ್ಲಿ ಎಷ್ಟು ಹಣವನ್ನು ಯಾವಾಗ ನೀಡಲಾಗಿದೆ ? (ವಿವರ ನೀಡುವುದು)

## ಶಾಸಕರು, ಸಚಿವರು, ಲೋಕಸಭಾ ಸದಸ್ಯರುಗಳಿಗೆ ಕಛೇರಿಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೪೨ (೧೦೫) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಚಿವರು, ಶಾಸಕರು, ಲೋಕಸಭಾ ಸದಸ್ಯರುಗಳಿಗೆ ಅವರುಗಳ ಕ್ಷೇತ್ರಗಳಲ್ಲಿ ಕೋರಿಕೆಯಂತೆ ಕಛೇರಿಗಳನ್ನು ತೆರೆಯಲು ಕಂದಾಯ ಇಲಾಖೆ ಮೂಲಕ ಅನುಮತಿ ನೀಡಲಾಗುತ್ತಿದೆಯೇ ;

(ಆ) ಈ ರೀತಿ ಕಛೇರಿಗಳನ್ನು ತೆರೆಯಲು ಅನುಮತಿ ನೀಡುವಾಗ ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಕಂದಾಯ ಹಾಗೂ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಅತಿಥಿ ಗೃಹಗಳಲ್ಲಿ ಸಚಿವರು, ಶಾಸಕರು, ಲೋಕಸಭಾ ಸದಸ್ಯರುಗಳಿಗೆ ಕಛೇರಿಗಳನ್ನು ತೆರೆಯಲು ಅನುಮತಿ ನೀಡಲಾಗಿದೆಯೇ ;

(ಈ) ಅತಿಥಿ ಗೃಹಗಳಲ್ಲಿ ಹಾಗೂ ಅತಿಥಿ ಗೃಹಗಳ ಆವರಣದಲ್ಲಿ ಕಛೇರಿಗಳನ್ನು ತೆರೆಯುವುದನ್ನು ನಿರ್ಬಂಧಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಬೆಣ್ಣೆತೊರೆ, ಅಮರ್ಜಾ, ಮುಲ್ಲಾಮಾರಿ ನೀರಾವರಿ ಯೋಜನೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೪೩ (೧೧೯) ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರ್ಗಿ ಜಿಲ್ಲೆ, ಬೆಣ್ಣೆ ತೊರೆ ಅಮರ್ಜಾ, ಮುಲ್ಲಾಮಾರಿ ನೀರಾವರಿ ಯೋಜನೆಗಳ ಕಾಮಗಾರಿ ಪ್ರಾರಂಭವಾಗಿರುವುದು ಯಾವಾಗ ;

(ಆ) ಈ ಯೋಜನೆಗಳಿಂದ ಎಷ್ಟು ಕ್ಷೇತ್ರಕ್ಕೆ ನೀರಾವರಿ ಸೌಲಭ್ಯ ದೊರೆಯಲಿದೆ ; ಇದುವರೆಗೆ ಎಷ್ಟು ಪ್ರದೇಶಗಳಿಗೆ ನೀರಾವರಿ ಸೌಕರ್ಯ ದೊರೆಯುತ್ತಿದೆ ; (ಯೋಜನಾವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಗಳು ಪ್ರಾರಂಭವಾದಾಗ ಇದ್ದ ಅಂದಾಜು ವೆಚ್ಚವೆಷ್ಟು ; ಇದುವರೆವಿಗೂ ಖರ್ಚಾಗಿರುವ ಅನುದಾನವೆಷ್ಟು ; ಯೋಜನೆಗಳು ಸಂಪೂರ್ಣವಾಗಿ ಪೂರ್ಣಗೊಳಿಸಲು ಬೇಕಾಗಿರುವ ಅನುದಾನವೆಷ್ಟು ? (ಯೋಜನಾವಾರು ಮಾಹಿತಿ ನೀಡುವುದು)

## ಬರಪೀಡಿತ ತಾಲ್ಲೂಕುಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೪ (೧೨೩) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾಂ ಜಿಲ್ಲೆಯಲ್ಲಿ ೨೦೧೩–೧೪ನೇ ಸಾಲಿನಲ್ಲಿ "ಬರಪೀಡಿತ ತಾಲ್ಲೂಕು" ಎಂದು ಘೋಷಣೆಯಾಗಿರುವ ತಾಲ್ಲೂಕುಗಳು ಯಾವುವು ;

(ಆ) ಬರಪೀಡಿತ ತಾಲ್ಲೂಕುಗಳಿಗೆ ಯಾವ ಯಾವ ಯೋಜನೆಗಳಿಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಇಂತಹ ತಾಲ್ಲೂಕುಗಳಿಗೆ ರಾಜ್ಯ ಸರ್ಕಾರದಿಂದ ಮಂಜೂರಾದ ಹಣವೆಷ್ಟು ;

(ಈ) ಮಂಜೂರಾದ ಹಣದಲ್ಲಿ ಉಪಯೋಗವಾಗದೇ ಉಳಿದ ಹಣವೆಷ್ಟು ; ಇದಕ್ಕೆ ಸರ್ಕಾರದ ಮಾನದಂಡಗಳೇನು ? (ವಿವರ ನೀಡುವುದು)

**ರಾಜಾಜಿನಗರದ ಇ.ಎಸ್.ಐ. ಆಸ್ಪತ್ರೆ ನವೀಕರಣ**

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

**೪೫** (೧೨೧) ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರಿನ ರಾಜಾಜಿನಗರದ ಇ.ಎಸ್.ಐ. ಆಸ್ಪತ್ರೆ (ರಾಜ್ಯ ಕಾರ್ಮಿಕರ ವಿಮಾ ಆಸ್ಪತ್ರೆ) ಯನ್ನು ನವೀಕರಿಸಲು ಖರ್ಚು ಮಾಡಿರುವ ಹಣವೆಷ್ಟು ;

(ಆ) ನವೀಕರಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರ ನೀಡಿರುವ ಅನುದಾನವೆಷ್ಟು ;

(ಇ) ಸದರಿ ಆಸ್ಪತ್ರೆಯ ನವೀಕರಣ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಯಿತು ; ಈ ಕಾಮಗಾರಿ ಯಾವಾಗ ಮುಕ್ತಾಯವಾಗುತ್ತದೆ ;

ಈ) ಬೆಂಗಳೂರಿನ ಪೀಣ್ಯಾ ಕೈಗಾರಿಕಾ ಪ್ರದೇಶದಲ್ಲಿ ಕಾರ್ಮಿಕ ರಾಜ್ಯ ವಿಮಾ ಯೋಜನೆಯಲ್ಲಿ ಆಸ್ಪತ್ರೆ ತೆರೆಯಲು ಎಷ್ಟು ಭೂಮಿ ನೀಡಲಾಗಿದೆ ; ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ; ಯಾವಾಗ ಪ್ರಾರಂಭಿಸಲಾಗುವುದು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ8, ಕಾ.ಸೂ. 214, ಪ್ರತಿಗಳು 1000